# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1002(1319)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : 2020-21ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳ ಬಗ್ಗೆ

(ಅ) 2020-21ನೇ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದಂತೆ ರಾಜ್ಯಾದ್ಯಾಂತ ಶಾಲೆಗೆ ದಾಖಲಾಗದೆ ಹೊರಗುಳಿದ ಮಕ್ಕಳ ಸಂಖ್ಯೆ ಎಷ್ಟು;

(ಆ) ದಾಖಲಾಗದೆ ಹೊರಗುಳಿದ ಮಕ್ಕಳನ್ನು ಶಾಲೆಗೆ ದಾಖಲಾಗುವಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಕಳೆದ ಮೂರು ವರ್ಷಗಳಿಂದ ರಾಜ್ಯಾದ್ಯಾಂತ ಎಷ್ಟು ಪ್ರಾಥಮಿಕ ಮತ್ತು ಪ್ರೌಢಶಾಲಾ ಕಟ್ಟಡಗಳನ್ನು ದುರಸ್ಥಿ ಮಾಡಿ ಉನ್ನತೀಕರಿಸಲಾಗಿದೆ; (ವಿವರ ನೀಡುವುದು)

(ಈ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು;

(ಉ) ಸಿಬ್ಬಂದಿ ಕೊರತೆ ಇರುವ ಕಾರಣ ಇಲಾಖೆ ಎದುರಿಸುತ್ತಿರುವ ತೊಂದರೆಯನ್ನು ಕಡಿಮೆ ಮಾಡಲು ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)